ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು–560001

ಸಂಖ್ಯೆ : ಸಹನಿಶಾಶಿ.ಆಶಾ/ಕ.ವೈ.ಕು:ಹಾ:ಸು/32544./ಇ.ವಿ:2020 ದಿನಾಂಕ : 09.03.2020

**–: ಸುತ್ತೋಲೆ (2) :–**

ವಿಷಯ : **Novel Coronavirus (COVID-19)** ನ ವೈರಸ್ ಸೋಂಕು ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಅಗತ್ಯ ಪೂರ್ವಸಿದ್ಧತಾ ಕ್ರಮಗಳ ಕುರಿತು.

ಉಲ್ಲೇಖ :
1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಕರ್ನಾಟಕ ಸರ್ಕಾರ ಇವರ ಸಲಹೆ ಪತ್ರ ಸಂಖ್ಯೆ : **DD/SSU/Novel Coronavirus/17/2019-20,** ದಿನಾಂಕ : 18.02.2020.
2) ಜಂಟಿ ಕಾರ್ಯದರ್ಶಿಗಳು, ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ನವದೆಹಲಿ, ಇವರ ಪತ್ರ ಸಂಖ್ಯೆ : **14-6/2020-IS-10,** ದಿನಾಂಕ : 21.02.2020.
3) ಈ ಕಚೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 27.02.2020
4) ದಿನಾಂಕ 09.03.2020 ರಂದು ನಡೆದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉನ್ನತಾಧಿಕಾರಿಗಳ ಸಭೆ.
5) ಈ ಕಚೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ 09.03.2020

– – –

Novel Coronavirus (COVID-19) ವಿವಿಧ ದೇಶಗಳಲ್ಲಿ ವ್ಯಾಪಕವಾಗಿ ಹರಡುತ್ತಿರುವ ಪ್ರಯುಕ್ತ ವಿಶ್ವ ಆರೋಗ್ಯ ಸಂಸ್ಥೆ (World Health Organisation)ಯು ಅಂತರಾಷ್ಟ್ರೀಯ ಮಟ್ಟದಲ್ಲಿ ಸಾರ್ವಜನಿಕರ ಆರೋಗ್ಯದ ಕಾಳಜಿ ಕುರಿತು ತುರ್ತು ಪರಿಸ್ಥಿತಿಯನ್ನು (Public Health Emergency of International Concern (PHEIC) ಘೋಷಿಸಿದೆ. ಪ್ರಸ್ತುತ ಈ ವೈರಾಣು ವಿಶ್ವದ ಬಹುತೇಕ ರಾಷ್ಟ್ರಗಳಲ್ಲಿ ವ್ಯಾಪಕವಾಗಿ ಹರಡುತ್ತಿರುವುದು ವರದಿಯಾಗುತ್ತಿದೆ. ಜೊತೆಗೆ ಈ ವೈರಾಣು ಹರಡುವ ವೇಗ ಮತ್ತು ವಿಧಾನ, ವಿಷಯದ ಗಂಭೀರತೆಯನ್ನು ಹೆಚ್ಚಿಸಿದೆ.

. . . . . . . .2

ಈ ರೋಗಾಣು ಶಾಲಾ ವಿದ್ಯಾರ್ಥಿಗಳಲ್ಲಿ ಪಸರಿಸುವುದನ್ನು ತಡೆಗಟ್ಟುವ ಸಲುವಾಗಿ ತೆಗೆದು ಕೊಳ್ಳಬೇಕಾದ ಮುನ್ನೆಚ್ಚರಿಕೆಯ ಕ್ರಮಗಳ ಬಗ್ಗೆ ಉಲ್ಲೇಖ (3)ರ ಈ ಕಛೇರಿಯ ಸುತ್ತೋಲೆಯಲ್ಲಿ ಈಗಾಗಲೇ ಸೂಚನೆಗಳನ್ನು ನೀಡಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸೂಚನೆಯ ಮೇರೆಗೆ ಮುನ್ನೆಚ್ಚರಿಕೆಯ ಕ್ರಮವಾಗಿ ಈಗಾಗಲೇ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಶಾಲೆಗಳಲ್ಲಿನ ಪೂರ್ವ ಪ್ರಾಥಮಿಕ, ಎಲ್.ಕೆ.ಜಿ ಮತ್ತು ಯು.ಕೆ.ಜಿ ಶಾಲಾ ವಿದ್ಯಾರ್ಥಿಗಳಿಗೆ ದಿನಾಂಕ 09.03.2020 ರಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರಜೆಯನ್ನು ಘೋಷಿಸಲಾಗಿದೆ.

ಮುಂದುವರೆದು, ಉಲ್ಲೇಖ (5) ರ ಈ ಕಚೇರಿ ಸುತ್ತೋಲೆಯಂತೆ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು Coronavirus ನಿಂದ ಉಂಟಾಗಬಹುದಾದ ಅಪಾಯದಿಂದ ಸಂರಕ್ಷಿಸುವ ನಿಟ್ಟಿನಲ್ಲಿ ಹಾಗೂ ಪರೀಕ್ಷಾ ದಿನಗಳು ಸಮೀಪಿಸುತ್ತಿರುವುದರಿಂದ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಹಾಗೂ ಪರೀಕ್ಷೆಯನ್ನು ನಡೆಸುವ ಬಗ್ಗೆ ಸೂಚನೆಗಳನ್ನು ನೀಡಲಾಗಿತ್ತು.

**ಪ್ರಸ್ತುತ, ಮುಂಜಾಗ್ರತೆಯ ಕ್ರಮವಾಗಿ ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳಲ್ಲಿ 1 ರಿಂದ 5ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ದಿನಾಂಕ 10.03.2020 ರಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರಜೆಯನ್ನು ಘೋಷಿಸಲಾಗಿದೆ.**

**ಬೆಂಗಳೂರು ಉತ್ತರ/ದಕ್ಷಿಣ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ 1 ರಿಂದ 5ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಗಳನ್ನು ನಡೆಸುವ ಬಗ್ಗೆ ಶಾಲೆಯು ಪುನರಾರಂಭವಾದ ನಂತರ ಸೂಕ್ತ ನಿರ್ದೇಶನ ನೀಡಲಾಗುವುದು.**

**ಉಳಿದ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಉಲ್ಲೇಖ (5) ರಲ್ಲಿ ಸೂಚಿಸಿರುವ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.**

ನಿರ್ದೇಶಕರು
(ಪ್ರಾಥಮಿಕ ಶಿಕ್ಷಣ)

ಗೆ :

4) ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ/ದಕ್ಷಿಣ/ಗ್ರಾಮಾಂತರ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
5) ಸಂಬಂಧಿಸಿದ ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
6) ಸಂಬಂಧಿಸಿದ ಶಾಲೆಗಳ ಮುಖ್ಯೋಪಾಧ್ಯಾಯರುಗಳಿಗೆ ಕಳುಹಿಸುತ್ತಾ ಅತೀ ತುರ್ತು ಕ್ರಮ ಮತ್ತು ಅನುಷ್ಠಾನಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

ಪ್ರತಿಯನ್ನು ಗೌರವಗಳೊಂದಿಗೆ ಮಾಹಿತಿಗಾಗಿ

4. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.
6. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.